ಶ್ರೀ ಆರ್.ವಿ. ದೇಶಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು) :

ಅ) ಹೌದು.

ಆ) 688 ಎಕರೆ

ಇ) 1. ಟೆಲ್ಕೋ ಘಟಕವು ತನ್ನ ವಾಣಿಜ್ಯ ಉತ್ಪಾದನೆಯನ್ನು ಇನ್ನು ಪ್ರಾರಂಭ ಮಾಡಿರುವುದಿಲ್ಲ.

2. ಟೆಲ್ಕೋ ಘಟಕದ ಸಹೋದರಿ ಘಟಕ, ಟೆಲ್ಕಾನ್ ಘಟಕವು ಕಟ್ಟಡ ಕಾರ್ಯ ಪ್ರಗತಿಯಲ್ಲಿದ್ದು, ಈ ಘಟಕವು ಸಧ್ಯಕ್ಕೆ ಟೆಲ್ಕೊ ಘಟಕದ ಮಳಿಗೆಯಲ್ಲಿ ಅಸೆಂಬ್ಲಿಂಗ್ ಕಾರ್ಯವನ್ನು ಪ್ರಾರಂಭಿಸಿದೆ.

ಧಾರವಾಡದ ಜೈಲಿನಲ್ಲಿ ಖೈದಿಗಳಿಗೆ ಮದ್ಯ ಹಾಗ ಮಾದಕ ವಸ್ತುಗಳ ಸರಬರಾಜು ಆಗಿರುವ ಬಗ್ಗೆ ಕ್ರಮ ತೆಗೆದುಕೊಳ್ಳುವುದು

3221 - ಶ್ರೀ ಚಿಕ್ಕನಗೌಡರ ಸಿದ್ದನಗೌಡ ಈಶ್ವರಗೌಡ (ಕಲಘಟಗಿ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡ ಜೈಲಿನಲ್ಲಿರುವ ಖೈದಿಗಳಿಗೆ ಮದ್ಯ ಹಾಗೂ ಮಾದಕ ವಸ್ತುಗಳನ್ನು ಸರಬರಾಜು ಮಾಡುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ನಿಷೇಧಿತ ವಸ್ತುಗಳನ್ನು ಸರಬರಾಜು ಮಾಡುತ್ತಿರುವವರನ್ನು ಪತ್ತೆ ಹಚ್ಚಲಾಗಿದೆಯೇ?

ಇ) ಅವರ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು) :

ಅ) ಹೌದು.

ಆ) ಹೌದು.

ಇ) ಇದರ ಬಗ್ಗೆ ಕಾರಾಗೃಹಗಳ ಉಪ ಮಹಾನಿರೀಕ್ಷಕರು ತನಿಖೆ ಮಾಡಿ ವರದಿ ನೀಡಿದ್ದು, ಇದರ ಆಧಾರದ ಮೇಲೆ ತಪ್ಪಿತಸ್ಥರ ವಿರುದ್ಧ ಶಿಸ್ತಿನ ಕ್ರಮ ಕೈಗೊಳ್ಳಲಾಗುತ್ತಿದೆ.

ರಾಜ್ಯದಲ್ಲಿ ಹೋಬಳಿಗೊಂದು ಕೆರೆ ಯೋಜನೆ

3222 - ಶ್ರೀ ಚಿಕ್ಕನಗೌಡರ ಸಿದ್ದನಗೌಡ ಈಶ್ವರಗೌಡ (ಕಲಘಟಗಿ) : ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ರಾಜ್ಯದಲ್ಲಿ ಮುಂದಿನ ದಿನಗಳಲ್ಲಿ ಹೋಬಳಿಗೊಂದು ಕೆರೆ ಯೋಜನೆಯನ್ನು ಆರಂಭಿಸಲಾಗುವುದೇ?

2) *ಈ ಯೋಜನೆಗೆ ಮೀಸಲಿಡಲಾಗಿರುವ ಹಣ ಎಷ್ಟು ? ಯೋಜನೆಗೆ ಇತರೆ ಸಂಸ್ಥೆಗಳಿಂದ ಅನುದಾನವನ್ನು ಕೋರಲಾಗುವುದು ?*

ಶ್ರೀ ಎಸ್. ಕುಮಾರ್ ಬಂಗಾರಪ್ಪ (ಸಣ್ಣ ನೀರಾವರಿ ರಾಜ್ಯ ಸಚಿವರು) :

1) ಮತ್ತು 2) ಇಂತಹ ಯೋಜನೆ ಕೈಗೊಳ್ಳುವ ಉದ್ದೇಶದಿಂದ 200.00 ಕೋಟಿ ರೂಪಾಯಿಗಳ ಆರ್ಥಿಕ ನೆರವಿಗಾಗಿ ಹುಡ್ಕೋ ಸಂಸ್ಥೆ ಸಂಪರ್ಕಿಸಲಾಗಿದೆ. ನೆರವು ದೊರಕಿದಲ್ಲಿ ಆರಂಭಿಸಲಾಗುವುದು.

ಗಡಿ ಭಾಗದ ಹಾಗೂ ಬರಗಾಲ ಪೀಡಿತ ಹಳ್ಳಿಗಳು ಹಾಗೂ ಹಿಪ್ಪರಗಿ ಆಣೆಕಟ್ಟಿನಲ್ಲಿ ಮುಳುಗಡೆಯಾಗುವ ಹಳ್ಳಿಗಳು

3224 - ಶ್ರೀ ಡೊಂಗರಗಾಂವ ಶಹಜಹಾನ್ ಇಸ್ಮಾಯಿಲ್ (ಅಥಣಿ) : ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) *ಅಥಣಿ ತಾಲ್ಲೂಕಿನ ಹಿಪ್ಪರಗಿ ಬ್ಯಾರೇಜಿನ ನೀರನ್ನು ಕರಿಮಸೂತಿ ಏತ ನೀರಾವರಿಯಿಂದ ಪೂರ್ವ ಮತ್ತು ಉತ್ತರ ಭಾಗದ ಹಳ್ಳಿಗಳಿಗೆ ವಿಸ್ತರಿಸಲು ಸರ್ಕಾರ ಕೈಗೊಂಡ ಕ್ರಮಗಳು ಯಾವುವು ?*

ಆ) *ಹಿಪ್ಪರಗಿ ಬ್ಯಾರೇಜಿನಲ್ಲಿ ಮುಳುಗಡೆಯಾಗಲಿರುವ 22 ಗ್ರಾಮಗಳ ಪುನರ್ ವಸತಿ ಸಲುವಾಗಿ ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳು ಯಾವುವು ?*

ಶ್ರೀ ಹೆಚ್.ಕೆ. ಪಾಟೀಲ್ (ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು) :

ಅ) ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ಪೂರ್ವ ಮತ್ತು ಉತ್ತರ ಭಾಗದ ಗ್ರಾಮಗಳ ಪ್ರದೇಶಕ್ಕೆ ನೀರಿನ ಸೌಲಭ್ಯ ಒದಗಿಸುವುದಕ್ಕಾಗಿ ಹಿಪ್ಪರಗಿ ಬ್ಯಾರೇಜ್ ಯೋಜನೆಯಡಿಯಲ್ಲಿನ ಹಲ್ಯಾಳ ಏತ ನೀರಾವರಿ ಪೂರ್ವ ಕಾಲುವೆಯ ಕಿ.ಮೀ. 11ರಲ್ಲಿ ನೀರೆತ್ತಿ ಕರಿಮಸೂತಿ ಏತ ನೀರಾವರಿ ಯೋಜನೆಯ ಮೂಲಕ 15,110 ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. ಕರಿಮಸೂತಿ ಏತ ನೀರಾವರಿ ಯೋಜನೆಯನ್ನು ಹಿಪ್ಪರಗಿ ಬ್ಯಾರೇಜ್ ಯೋಜನೆಯ ಕಾಲುವೆ ನೆಟ್ ವರ್ಕ್‌ನ ವಿಸ್ತರಣೆಯ ಒಂದು ಅಂಗವಾಗಿ ಸೇರಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದ್ದು, ಇದರ ಬಗ್ಗೆ ಶೀಘ್ರವಾಗಿ ನಿರ್ಧಾರ ಕೈಗೊಳ್ಳಲಾಗುವುದು.

ಆ) ಹಿಪ್ಪರಗಿ ಬ್ಯಾರೇಜ್ ಯೋಜನೆಯಡಿಯಲ್ಲಿ 28 ಗ್ರಾಮ ಪೂರ್ಣ ಇಲ್ಲವೇ ಭಾಗಶಃ ಮುಳುಗಡೆ ಆಗಲಿದ್ದು, ಈ ಗ್ರಾಮಗಳ ಪುನರ್‌ವಸತಿ ಮತ್ತು ಪುನರ್ ನಿರ್ಮಾಣದ ಕಾರ್ಯಗಳನ್ನು ಕೈಗೊಳ್ಳುವ ಬಗ್ಗೆ ನಿರ್ಧಾರ ಕೈಗೊಳ್ಳಲು ಬೆಳಗಾವಿ ಜಿಲ್ಲಾ ಪುನರ್‌ವಸತಿ ಸಮಿತಿಯನ್ನು ರಚಿಸಲಾಗಿದೆ. ಈ ಸಮಿತಿಯು ಬೆಳಗಾವಿ ಜಿಲ್ಲಾ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ 3.6.2000 ರಂದು ಸಭೆ ಜರುಗಿಸಿ ಈ ಗ್ರಾಮಗಳ ಪುನರ್ ವಸತಿ ಕಾರ್ಯ ಕುರಿತು ಕೂಲಂಕಷವಾಗಿ ಚರ್ಚಿಸಿದ ನಂತರ ವಿಶೇಷ ಜಿಲ್ಲಾಧಿಕಾರಿಗಳು, ಭೂ ಸ್ವಾಧೀನ, ಬೆಳಗಾವಿ ಹಾಗೂ ಸಂಬಂಧಿಸಿದ ಕಾರ್ಯನಿರ್ವಾಹಕ